**ಕರ್ನಾಟಕ ಸರ್ಕಾರ**

# ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ – 2022

## ಪರೀಕ್ಷಾ ದಿನಾಂಕ: 06/11/2022 (ಭಾನುವಾರ)

**ಆಯುಕ್ತರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ,**
**ಸರ್ಕಾರಿ ಜೂನಿಯರ್ ಕಾಲೇಜು ಆವರಣ, ಕೆಂಪೇಗೌಡ ರಸ್ತೆ,**
**ಬೆಂಗಳೂರು–560 009.**

## ಹಿನ್ನೆಲೆ: (BACKGROUND)

ಆರ್.ಟಿ.ಇ ಕಾಯ್ದೆಯ ಸೆಕ್ಷನ್ 23 ಉಪ ವಿಭಾಗ(1)ರ ನಿಬಂಧನೆಗಳ ಅನುಸಾರ 23 ಆಗಸ್ಟ್ 2010, 29 ಜುಲೈ 2011 ಮತ್ತು 28 ಜೂನ್ 2018 ರ ಅಧಿಸೂಚನೆಯಂತೆ ರಾಷ್ಟ್ರೀಯ ಶಿಕ್ಷಣ ಶಿಕ್ಷಕರ ಪರಿಷತ್ (NCTE) 1 ರಿಂದ 8ನೇ ತರಗತಿಗಳಿಗೆ ಶಿಕ್ಷಕರಾಗಿ ನೇಮಕಾತಿಗೆ ಅರ್ಹರಾಗಲು ಕನಿಷ್ಠ ಅರ್ಹತೆಗಳನ್ನು ನಿಗದಿಪಡಿಸಿದೆ.

ಆರ್.ಟಿ.ಇ ಕಾಯ್ದೆ 2ನೇ ವಿಭಾಗದಲ್ಲಿ ಷರತ್ತು (ಎನ್) ನಲ್ಲಿ ಉಲ್ಲೇಖಿಸಲ್ಪಟ್ಟಿರುವಂತೆ ಯಾವುದೇ ಶಾಲೆಗಳಲ್ಲಿ ಶಿಕ್ಷಕರಾಗಿ ನೇಮಕಾತಿಗೆ ಅರ್ಹತೆ ಪಡೆಯಲು NCTE ಯಿಂದ ರೂಪಿಸಲಾದ ಮಾರ್ಗಸೂಚಿಗಳಿಗೆ ಅನುಗುಣವಾಗಿ ಸೂಕ್ತ ಸರ್ಕಾರದ ಮೂಲಕ ನಡೆಸಲಾಗುವ ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ (ಟಿ.ಇ.ಟಿ) ಉತ್ತೀರ್ಣರಾಗಿರಬೇಕು.

ಶಿಕ್ಷಕರಾಗಿ ನೇಮಕಾತಿಗೆ ಅರ್ಹರಾಗಲು ಟಿ.ಇ.ಟಿ ಯನ್ನು ಕನಿಷ್ಟ ಅರ್ಹತೆಯನ್ನಾಗಿ ಅಳವಡಿಸುವ ಉದ್ದೇಶಗಳು :

1. ನೇಮಕಾತಿ ಪ್ರಕ್ರಿಯೆಯಲ್ಲಿ ರಾಷ್ಟ್ರೀಯ ಮಾನದಂಡಗಳನ್ನು ಮತ್ತು ಶಿಕ್ಷಕರ ಗುಣಮಟ್ಟವನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರವಹಿಸಲು.
2. ಶಿಕ್ಷಕ ಶಿಕ್ಷಣ ಸಂಸ್ಥೆಗಳು ಮತ್ತು ಪ್ರಶಿಕ್ಷಣಾರ್ಥಿಗಳು ತಮ್ಮ ಕಾರ್ಯಕ್ಷಮತೆಯ ಸುಧಾರಣೆಯನ್ನು ಪ್ರೇರೇಪಿಸಲು.
3. ಸರ್ಕಾರವು ಶಿಕ್ಷಕರ ಗುಣಮಟ್ಟಕ್ಕೆ ವಿಶೇಷ ಒತ್ತು ನೀಡುತ್ತದೆ ಎಂಬ ಸಕಾರಾತ್ಮಕ ಸಂದೇಶವನ್ನು ಎಲ್ಲಾ ಭಾಗೀದಾರರಿಗೆ ನೀಡಲು.

ಕರ್ನಾಟಕ ಸರ್ಕಾರವು ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು (KARTET) ನಡೆಸುವ ಜವಾಬ್ದಾರಿಯನ್ನು ಕೇಂದ್ರೀಕೃತ ದಾಖಲಾತಿ ಘಟಕ (ಸಿ.ಎ.ಸಿ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ವಹಿಸಿದೆ.

### 1. <u>ಸಂಕ್ಷಿಪ್ತ ಶೀರ್ಷಿಕೆ</u> (Short Title)

ಈ ನಿಯಮಗಳನ್ನು "ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ ನಿಯಮಗಳು–2011" (KARTET) ಎಂದು ಕರೆಯಲಾಗುತ್ತದೆ.

### 2. <u>ವ್ಯಾಖ್ಯಾನಗಳು</u>

1. "ಸರ್ಕಾರ" ಎಂದರೆ "ಕರ್ನಾಟಕ ಸರ್ಕಾರ"
2. "ಸಚಿವಾಲಯ" ಎಂದರೆ "ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವಾಲಯ". (ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವಾಲಯ)
3. "ಸಿ.ಎ.ಸಿ" ಎಂದರೆ "ಕೇಂದ್ರೀಕೃತ ದಾಖಲಾತಿ ಘಟಕ", ಬೆಂಗಳೂರು.
4. "ಶಾಲೆ" ಎಂದರೆ ಈ ಉದ್ದೇಶಕ್ಕಾಗಿ ಆರ್.ಟಿ.ಇ–2009ರ ಪ್ರಕಾರ KARTETಗೆ ಅನ್ವಯವಾಗುವ ಎಲ್ಲಾ ಶಾಲೆಗಳು.
5. "KARTET" ಎಂದರೆ "ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ".

6. “ಅರ್ಹತಾ ಪರೀಕ್ಷೆ” ಎಂದರೆ “ಅಭ್ಯರ್ಥಿಗಳು ಈ ಪರೀಕ್ಷೆಯಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹತೆ ಗಳಿಸುತ್ತಾರೆ.”
7. “ಪರಿಶಿಷ್ಠ ಜಾತಿ” ಅಂದರೆ “ಭಾರತ ಸರ್ಕಾರದಿಂದ ಸೂಚಿಸಿರುವ ಪರಿಶಿಷ್ಟ ಜಾತಿಗಳು”.
8. “ಪರಿಶಿಷ್ಠ ಪಂಗಡಗಳು” ಅಂದರೆ “ಭಾರತ ಸರ್ಕಾರದಿಂದ ಸೂಚಿಸಿರುವ ಪರಿಶಿಷ್ಟ ಪಂಗಡಗಳು”.
9. “ವಿಶೇಷ ಅಗತ್ಯವುಳ್ಳ ವ್ಯಕ್ತಿಗಳು” ಎಂದರೆ “ಕರ್ನಾಟಕ ಸರ್ಕಾರವು ನಿಗದಿಪಡಿಸಿದ ಮತ್ತು ನಿರ್ದಿಷ್ಟಪಡಿಸಿದಂತೆ ವಿಶೇಷ ಅಗತ್ಯವುಳ್ಳ ವ್ಯಕ್ತಿಗಳು ಎಂದು ಅರ್ಥ”.
10. “ಪರೀಕ್ಷಾ ಪ್ರಾಧಿಕಾರ (Examination authority) ಎಂದರೆ “ಕರ್ನಾಟಕ ಸರ್ಕಾರದ ಪರವಾಗಿ ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ನಡೆಸುತ್ತಿರುವ ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು”.

**3. ಅಭ್ಯರ್ಥಿಗಳಿಗೆ ಸೂಚನೆಗಳು:**

1. ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ–2022ಕ್ಕೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ದಿನಾಂಕ:**01/09/2022** ರಿಂದ **30/09/2022ರ** ಒಳಗಾಗಿ ಇಲಾಖಾ ವೆಬ್‌ಸೈಟ್ www.schooleducation.kar.nic.in ಮೂಲಕ ಸಲ್ಲಿಸುವುದು.
2. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯನ್ನು ಪೂರ್ಣ ವಿವರಗಳೊಂದಿಗೆ ಭರ್ತಿ ಮಾಡಿ, ಸ್ಕ್ಯಾನ್ ಮಾಡಲಾದ ತಮ್ಮ ಭಾವಚಿತ್ರ ಹಾಗೂ ಸಹಿಯನ್ನು ಜೆ.ಪಿ.ಇ.ಜಿ. (J.P.E.G. Format) ನಮೂನೆಯಲ್ಲಿ ಅಪ್‌ಲೋಡ್ ಮಾಡುವುದು.
3. ಆನ್‌ಲೈನ್ ಅರ್ಜಿಯಲ್ಲಿ ಅಗತ್ಯವಿರುವ ಎಲ್ಲಾ ಮಾಹಿತಿಗಳನ್ನು ಪೂರ್ಣವಾಗಿ ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ತಮ್ಮ ನೋಂದಣಿ ಸಂಖ್ಯೆ ಹಾಗೂ ಪೂರ್ಣವಿವರಗಳನ್ನೊಳಗೊಂಡ ಅರ್ಜಿಯ ಕಂಪ್ಯೂಟರ್ ಜನರೇಟೆಡ್ ಪ್ರತಿಯ Print out ನ್ನು ಪಡೆದುಕೊಳ್ಳುವುದು.

**4. ಆನ್‌ಲೈನ್ ಅರ್ಜಿ ಸಲ್ಲಿಸಲು ಅನುಸರಿಸಬೇಕಾದ ಕ್ರಮ:**

1. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಮೊದಲು ಅಭ್ಯರ್ಥಿಗಳು ಇಲಾಖಾ ವೆಬ್‌ಸೈಟ್ www.schooleducation.kar.nic.in ನಲ್ಲಿ ನೀಡಲಾಗಿರುವ ಸೂಚನೆಗಳನ್ನು ತಪ್ಪದೇ ಓದಿ, ಅರ್ಥೈಸಿಕೊಳ್ಳುವುದು.
2. ‘Registration’ ಮತ್ತು ‘Login’ ನೊಂದಿಗೆ ಆನ್‌ಲೈನ್ ಅರ್ಜಿಯನ್ನು ಪೂರ್ಣ ವಿವರಗಳೊಂದಿಗೆ ಭರ್ತಿ ಮಾಡುವುದು.
3. ಸ್ಕ್ಯಾನ್ ಮಾಡಿದ ಅಭ್ಯರ್ಥಿಯ ಭಾವಚಿತ್ರ (50KB ಕ್ಕಿಂತಲೂ ಕಡಿಮೆ) ಹಾಗೂ ಸಹಿಯನ್ನು (40KB ಕ್ಕಿಂತಲೂ ಕಡಿಮೆ) ಅಪ್‌ಲೋಡ್ ಮಾಡುವುದು.
4. ಪರೀಕ್ಷಾ ಶುಲ್ಕವನ್ನು Internet Banking / Debit Card/ Credit Card/ UPI ಅಥವಾ ಬ್ಯಾಂಕ್ ಚಲನ್ (ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಬ್ಯಾಂಕಿನಲ್ಲಿ ಮಾತ್ರ ಚಲನ್ ಮೂಲಕ ಶುಲ್ಕ ಪಾವತಿಸುವುದು) ಮೂಲಕವೇ ಪಾವತಿಸತಕ್ಕದ್ದು.
5. ಅಭ್ಯರ್ಥಿಗಳು ಒಮ್ಮೆ ಪಾವತಿಸಿರುವ ಪರೀಕ್ಷಾ ಶುಲ್ಕವನ್ನು ಯಾವುದೇ ಸಂದರ್ಭದಲ್ಲಿಯೂ ಮರುಪಾವತಿ ಮಾಡುವುದಿಲ್ಲ ಅಥವಾ ಮುಂದಿನ ಪರೀಕ್ಷೆಗಳಿಗೆ ಹೊಂದಾಣಿಕೆ ಮಾಡಲಾಗುವುದಿಲ್ಲ.

6. **INTERNET Crash** ಅನ್ನು ತಪ್ಪಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ಕಾಯದೇ ಮುಂಚಿತವಾಗಿ ಅರ್ಜಿ ಸಲ್ಲಿಸುವುದು.
7. ಅಭ್ಯರ್ಥಿಗಳು ತಮ್ಮ ಆನ್‌ಲೈನ್ ಅರ್ಜಿಗಳನ್ನು www.schooleducation.kar.nic.in ವೆಬ್‌ಸೈಟ್ ಮೂಲಕ ಶುಲ್ಕ ಪಾವತಿಸಿದ ನಂತರ, ಅಭ್ಯರ್ಥಿಗಳ User name and Password ಬಳಸಿ ಡೌನ್‌ಲೋಡ್ ಮಾಡಿಕೊಳ್ಳುವುದು. ಅರ್ಜಿ ಶುಲ್ಕ ಪಾವತಿಯಾದ ಎರಡು ದಿನಗಳ ನಂತರದಲ್ಲೂ ಪೇಮೆಂಟ್ ಸ್ಟೇಟಸ್ (Payment Status) ಪೆಂಡಿಂಗ್ ಎಂದು ಕಂಡುಬಂದಲ್ಲಿ ಕೇಂದ್ರೀಕೃತ ದಾಖಲಾತಿ ಘಟಕವನ್ನು ಸಂಪರ್ಕಿಸುವುದು.
8. ಅಭ್ಯರ್ಥಿಗಳು ಡೌನ್‌ಲೋಡ್ ಮಾಡಲಾದ ತಮ್ಮ ಅನ್‌ಲೈನ್ ಅರ್ಜಿಯನ್ನು ಮುಂದಿನ ದಿನಗಳಲ್ಲಿ ಯಾವುದೇ ಕಛೇರಿ ಸಂಬಂಧಿತ ಆಡಳಿತ ಸಂಪರ್ಕಕ್ಕಾಗಿ ತಮ್ಮ ಬಳಿ ಕಡ್ಡಾಯವಾಗಿ ಇರಿಸಿಕೊಳ್ಳುವುದು.
9. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ನೀಡಿರುವ ಮಾಹಿತಿಯಲ್ಲಿ ಏನಾದರೂ ತಿದ್ದುಪಡಿ ಮಾಡಬೇಕಾದಲ್ಲಿ ಪರೀಕ್ಷಾ ಶುಲ್ಕ ಪಾವತಿಸುವುದಕ್ಕಿಂತ ಮೊದಲು ಮಾಡಬೇಕಾಗಿರುತ್ತದೆ. ನಂತರದಲ್ಲಿ ಯಾವುದೇ ತಿದ್ದುಪಡಿ/ಬದಲಾವಣೆಗೆ ಅವಕಾಶವಿರುವುದಿಲ್ಲ.
10. ಅರ್ಜಿಯನ್ನು ಸಲ್ಲಿಸಿದ ನಂತರ ಅಭ್ಯರ್ಥಿಯ ಮಾಹಿತಿಯಲ್ಲಿ ಯಾವುದೇ ವ್ಯತ್ಯಾಸವಿದ್ದಲ್ಲಿ ಅದರಿಂದ ಉಂಟಾಗುವ ಪರಿಣಾಮಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.
11. ಅಭ್ಯರ್ಥಿಗಳು ಒಮ್ಮೆ ಮಾಹಿತಿ ತುಂಬಿ ಅಂತಿಮವಾಗಿ ಅರ್ಜಿ ಸಲ್ಲಿಸಿದ ಮೇಲೆ ಯಾವುದೇ ತಿದ್ದುಪಡಿಗೆ, ಹೊಸ ವಿವರಗಳನ್ನು ಅರ್ಜಿಯಲ್ಲಿ ಸೇರಿಸಲು ಅಥವಾ ತೆಗೆಯಲು ಅವಕಾಶವಿರುವುದಿಲ್ಲ. ಈ ಸಂಬಂಧ ಉದ್ಭವಿಸುವ ಸಮಸ್ಯೆಗಳಿಗೆ ಕೇಂದ್ರೀಕೃತ ದಾಖಲಾತಿ ಘಟಕವು ಜವಾಬ್ದಾರಿಯಾಗಿರುವುದಿಲ್ಲ.
12. ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿನ ಅರ್ಹತೆಯು ಶಿಕ್ಷಕರ ನೇಮಕಾತಿಗೆ ಅಗತ್ಯವಾದ ಪ್ರವೇಶಾರ್ಹತೆಯೇ ಹೊರತು, ಅಭ್ಯರ್ಥಿಗಳು ನೇಮಕಾತಿಗೆ ಯಾವುದೇ ಹಕ್ಕನ್ನು ಚಲಾಯಿಸಲು ಅವಕಾಶವಿರುವುದಿಲ್ಲ.
13. **KARTET-2022 ಕ್ಕೆ** ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಉಪಯೋಗದಲ್ಲಿರುವಂತಹ ತಮ್ಮ ಸ್ವಂತ ಮೊಬೈಲ್‌ನ ಸಂಪರ್ಕ ಸಂಖ್ಯೆಯನ್ನು ಹಾಗೂ ಇ-ಮೇಲ್ ಐಡಿಯನ್ನು ಆನ್‌ಲೈನ್ ಅರ್ಜಿಯಲ್ಲಿ ಕಡ್ಡಾಯವಾಗಿ ನಮೂದಿಸುವುದು.
14. ವೆಬ್‌ಸೈಟ್‌ನಲ್ಲಿ ನೀಡುವ ಹೆಚ್ಚುವರಿ ಮಾಹಿತಿಗಳನ್ನು ಪಡೆದುಕೊಳ್ಳಲು ಅಭ್ಯರ್ಥಿಗಳು ಆಗಿಂದಾಗ್ಗೆ ಇಲಾಖಾ ವೆಬ್‌ಸೈಟ್ www.schooleducation.kar.nic.in ವೀಕ್ಷಿಸುವುದು.

**5. <u>ಪರೀಕ್ಷಾ ಶುಲ್ಕ ವಿವರ:</u>**

| ಪ್ರವರ್ಗ | ಪತ್ರಿಕೆ-1 ಅಥವಾ ಪತ್ರಿಕೆ-2 ಮಾತ್ರ | ಪತ್ರಿಕೆ-1 ಹಾಗೂ ಪತ್ರಿಕೆ-2 |
|---|---|---|
| ಸಾಮಾನ್ಯವರ್ಗ, 2ಎ, 2ಬಿ, 3ಎ ಮತ್ತು 3ಬಿ | ರೂ. 700-00 | ರೂ. 1000-00 |
| ಪ.ಜಾ./ಪ.ವರ್ಗ/ಪ್ರವರ್ಗ-1 ಮಾತ್ರ | ರೂ. 350-00 | ರೂ. 500-00 |
| ವಿಶೇಷ ಅಗತ್ಯತೆಯುಳ್ಳ ಅಭ್ಯರ್ಥಿಗಳಿಗೆ ಪರೀಕ್ಷಾ ಶುಲ್ಕದಿಂದ ವಿನಾಯಿತಿ ಇರುತ್ತದೆ. | | |

Bank transactional charges :

| Mode of Payment | Bank | Amount | Pricing (Excl. taxes) |
|---|---|---|---|
| Internet Banking | All banks | Up to Rs. 500/- | Rs.5/- per transaction |
| | | Above Rs.500/- | Rs.10/- per transaction |
| Debit card | Visa, Master, Maestro, | Up to Rs.2000/- | 0.75%of the trans. amount |
| | | Above Rs.2000/- | 0.90% of the trans. amount |
| Credit Card | Visa, Master, AMEX | - | 1.20% of the trans. amount |
| UPI | All Banks | - | Free |
| Chalan | State Bank Of India | - | - |

### 6. ಪ್ರವೇಶ ಪತ್ರ:

ಅಭ್ಯರ್ಥಿಗಳು KARTET-2022 ರ ಪರೀಕ್ಷೆಯ **ಪ್ರವೇಶ ಪತ್ರವನ್ನು** ದಿನಾಂಕ: **21/10/2022** ನಂತರ ಇಲಾಖಾ ವೆಬ್‌ಸೈಟ್ www.schooleducation.kar.nic.in ನಿಂದ ಪಡೆದುಕೊಳ್ಳುವುದು. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ಸಲ್ಲಿಸಿರುವ ಮಾಹಿತಿಯು ಪ್ರವೇಶ ಪತ್ರದಲ್ಲಿ ನಮೂದಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳ ಮಾಹಿತಿ, ಭಾವಚಿತ್ರ ಹಾಗೂ ಅವರ ಸಹಿಗೆ ಸಂಬಂಧಪಟ್ಟಂತೆ ಏನಾದರೂ ವ್ಯತ್ಯಾಸವಿದ್ದಲ್ಲಿ ಸರಿಪಡಿಸಿಕೊಳ್ಳಲು ಅವಕಾಶವಿರುವುದಿಲ್ಲ ಹಾಗೂ ಈ ಸಂಬಂಧ ಉದ್ಭವಿಸುವ ಸಮಸ್ಯೆಗಳಿಗೆ ಕೇಂದ್ರೀಕೃತ ದಾಖಲಾತಿ ಘಟಕವು ಜವಾಬ್ದಾರಿಯಾಗಿರುವುದಿಲ್ಲ.

### 7. ಅರ್ಹತೆ

**7.1. ಪತ್ರಿಕೆ–1: ಅಗತ್ಯವಿರುವ ಕನಿಷ್ಠ ವಿದ್ಯಾರ್ಹತೆ: (1 ರಿಂದ 5ನೇ ತರಗತಿಗಳಿಗೆ)**

ಪಿ.ಯು.ಸಿ/ ಸೀನಿಯರ್ ಸೆಕೆಂಡರಿ (ತತ್ಸಮಾನ) ಪರೀಕ್ಷೆಯಲ್ಲಿ ಶೇ.50 ರಷ್ಟು ಅಂಕಗಳನ್ನು ಗಳಿಸಿರಬೇಕು ಹಾಗೂ ಎರಡು ವರ್ಷಗಳ D.El.Ed. ಕೋರ್ಸಿನ (ಯಾವ ಹೆಸರಿನಿಂದ ಕರೆಯುವರೋ ಆ ಹೆಸರಿನ) ದ್ವಿತೀಯ ವರ್ಷದಲ್ಲಿ ತೇರ್ಗಡೆ ಹೊಂದಿರುವವರು ಅಥವಾ ದ್ವಿತೀಯ ವರ್ಷದ ಅಂತಿಮ ಪರೀಕ್ಷೆಗೆ ಹಾಜರಾಗಿ ಫಲಿತಾಂಶದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳು.

**ಅಥವಾ**

ಪಿ.ಯು.ಸಿ / ಸೀನಿಯರ್ ಸೆಕೆಂಡರಿ (ತತ್ಸಮಾನ) ಪರೀಕ್ಷೆಯಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಗಳಿಸಿರಬೇಕು ಹಾಗೂ ನಾಲ್ಕು ವರ್ಷಗಳ ಎಲಿಮೆಂಟರಿ ಎಜುಕೇಶನ್‌ನಲ್ಲಿ (B.El.Ed) ತೇರ್ಗಡೆ ಹೊಂದಿರುವವರು ಅಥವಾ ಅಂತಿಮ ವರ್ಷದ/ಅಂತಿಮ ಸೆಮಿಸ್ಟರ್‌ನ ಪರೀಕ್ಷೆಗೆ ಹಾಜರಾಗಿ ಫಲಿತಾಂಶದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳು.

**ಅಥವಾ**

ಸೀನಿಯರ್ ಸೆಕೆಂಡರಿ (ತತ್ಸಮಾನ) ಪರೀಕ್ಷೆಯಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಗಳಿಸಿರಬೇಕು ಹಾಗೂ ಎರಡು ವರ್ಷಗಳ ಡಿಪ್ಲೊಮಾ ಇನ್ ಎಜುಕೇಶನ್ (ವಿಶೇಷ ಶಿಕ್ಷಣ) ತೇರ್ಗಡೆ ಹೊಂದಿರುವವರು ಅಥವಾ ದ್ವಿತೀಯ ವರ್ಷದ, ವಾರ್ಷಿಕ ಪರೀಕ್ಷೆ/ಅಂತಿಮ ಸೆಮಿಸ್ಟರ್‌ನ ಪರೀಕ್ಷೆಗೆ ಹಾಜರಾಗಿ ಫಲಿತಾಂಶದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳು.

**ಅಥವಾ**

ಪದವಿಯಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಗಳಿಸಿರಬೇಕು ಹಾಗೂ ಎರಡು ವರ್ಷಗಳ D.El.Ed ಕೋರ್ಸಿನ (ಯಾವ ಹೆಸರಿನಿಂದ ಕರೆಯುವರೋ ಆ ಹೆಸರಿನ) ದ್ವಿತೀಯ ವರ್ಷದಲ್ಲಿ ತೇರ್ಗಡೆ ಹೊಂದಿರುವವರು ಅಥವಾ ದ್ವಿತೀಯ ವರ್ಷದ, ವಾರ್ಷಿಕ ಪರೀಕ್ಷೆ/ಅಂತಿಮ ಪರೀಕ್ಷೆಗೆ ಹಾಜರಾಗಿ ಫಲಿತಾಂಶದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳು.

**ಅಥವಾ**

ಪದವಿಯಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಗಳಿಸಿರಬೇಕು ಹಾಗೂ ಬಿ.ಇಡಿ ಪದವಿಯಲ್ಲಿ ತೇರ್ಗಡೆ ಹೊಂದಿರುವವರು ಅಥವಾ ಅಂತಿಮ ಸೆಮಿಸ್ಟರ್‌ನ ಪರೀಕ್ಷೆಗೆ ಹಾಜರಾಗಿ ಫಲಿತಾಂಶದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳು.

**7.2. ಪತ್ರಿಕೆ–2: ಅಗತ್ಯವಿರುವ ಕನಿಷ್ಠ ವಿದ್ಯಾರ್ಹತೆ: (6 ರಿಂದ 8ನೇ ತರಗತಿಗಳಿಗೆ)**

ಪದವಿಯಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಗಳಿಸಿರಬೇಕು ಹಾಗೂ ಎರಡು ವರ್ಷಗಳ D.El.Ed ಕೋರ್ಸಿನ (ಯಾವ ಹೆಸರಿನಿಂದ ಕರೆಯುವರೋ ಆ ಹೆಸರಿನ) ದ್ವಿತೀಯ ವರ್ಷದಲ್ಲಿ ತೇರ್ಗಡೆ ಹೊಂದಿರುವವರು ಅಥವಾ ದ್ವಿತೀಯ ವರ್ಷದ ಅಂತಿಮ ಪರೀಕ್ಷೆಗೆ ಹಾಜರಾಗಿ ಫಲಿತಾಂಶದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳು.

**ಅಥವಾ**

ಪದವಿಯಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಗಳಿಸಿರಬೇಕು ಹಾಗೂ ಬಿ.ಇಡಿ ಪದವಿಯಲ್ಲಿ ತೇರ್ಗಡೆ ಹೊಂದಿರುವವರು ಅಥವಾ ಅಂತಿಮ ಸೆಮಿಸ್ಟರ್‌ನ ಪರೀಕ್ಷೆಗೆ ಹಾಜರಾಗಿ ಫಲಿತಾಂಶದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳು.

**ಅಥವಾ**

ಪಿ.ಯು.ಸಿ/ ಸೀನಿಯರ್ ಸೆಕೆಂಡರಿ (ತತ್ಸಮಾನ) ಪರೀಕ್ಷೆಯಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಗಳಿಸಿರಬೇಕು ಹಾಗೂ ನಾಲ್ಕು ವರ್ಷಗಳ ಬ್ಯಾಚುಲರ್ ಇನ್ ಎಲಿಮೆಂಟರಿ ಎಜುಕೇಶನ್‌ನಲ್ಲಿ (B.El.Ed**)** ತೇರ್ಗಡೆ ಹೊಂದಿರುವವರು ಅಥವಾ ಅಂತಿಮ ವರ್ಷದ/ಸೆಮಿಸ್ಟರ್‌ನ ಪರೀಕ್ಷೆಗೆ ಹಾಜರಾಗಿ ಫಲಿತಾಂಶದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳು.

**ಅಥವಾ**

ಪಿ.ಯು.ಸಿ/ಸೀನಿಯರ್ ಸೆಕೆಂಡರಿ (ತತ್ಸಮಾನ) ಪರೀಕ್ಷೆಯಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಗಳಿಸಿರಬೇಕು ಹಾಗೂ ನಾಲ್ಕು ವರ್ಷಗಳ ಪದವಿಯಲ್ಲಿ ತೇರ್ಗಡೆ ಹೊಂದಿರುವವರು ಅಥವಾ ಅಂತಿಮ ವರ್ಷದ, ವಾರ್ಷಿಕ ಪರೀಕ್ಷೆ/ಅಂತಿಮ ಸೆಮಿಸ್ಟರ್‌ನ ಪರೀಕ್ಷೆಗೆ ಹಾಜರಾಗಿ ಫಲಿತಾಂಶದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳು.

**ಅಥವಾ**

ಪದವಿಯಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಗಳಿಸಿರಬೇಕು ಹಾಗೂ ಎರಡು ವರ್ಷದ ಬಿ.ಇಡಿ (ವಿಶೇಷ ಶಿಕ್ಷಣ) ಪದವಿಯಲ್ಲಿ ತೇರ್ಗಡೆ ಹೊಂದಿರುವವರು ಅಥವಾ ಅಂತಿಮ ವರ್ಷದ/ಅಂತಿಮ ಸೆಮಿಸ್ಟರ್‌ನ ಪರೀಕ್ಷೆಗೆ ಹಾಜರಾಗಿ ಫಲಿತಾಂಶದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳು.

**ಸೂಚನೆ:–**

1) ಪರಿಶಿಷ್ಟ ಜಾತಿ / ಪರಿಶಿಷ್ಟವರ್ಗ / ಪ್ರವರ್ಗ–1 / ವಿಶೇಷ ಅಗತ್ಯತೆಯುಳ್ಳ ಅಭ್ಯರ್ಥಿಗಳಿಗೆ ಅರ್ಹ ವಿದ್ಯಾರ್ಹತೆಯಲ್ಲಿ ನಿಗದಿಪಡಿಸಿರುವ ಅರ್ಹ ಅಂಕಗಳಲ್ಲಿ ಶೇ.5% ರಷ್ಟು ವಿನಾಯಿತಿ ನೀಡಲಾಗಿದೆ.
2) ಎನ್.ಸಿ.ಟಿ.ಇ. ಯಿಂದ ಮಾನ್ಯತೆ ಪಡೆದಂತಹ **ಡಿಪ್ಲೋಮಾ/ಪದವಿ ಕೋರ್ಸುಗಳನ್ನು** ಮಾತ್ರ ಕೆ.ಎ.ಆರ್**.ಟಿ.ಇ.ಟಿ.** ಪರೀಕ್ಷೆ ಬರೆಯಲು ಇಚ್ಛಿಸುವ ಆಭ್ಯರ್ಥಿಗಳ ವಿದ್ಯಾರ್ಹತೆಯಲ್ಲಿ ಪರಿಗಣಿಸಲಾಗಿದೆ.

ಆದಾಗ್ಯೂ **ರಿಹ್ಯಾಬಿಲಿಟೇಷನ್ ಕೌನ್ಸಿಲ್ ಆಫ್ ಇಂಡಿಯಾ (RCI)** ದಿಂದ ಮಾನ್ಯತೆ ಪಡೆದಂತಹ ಡಿಪ್ಲೋಮಾ ಇನ್ ಎಜುಕೇಶನ್ (ವಿಶೇಷ ಶಿಕ್ಷಣ) ಹಾಗೂ ಬಿ.ಇಡಿ (ವಿಶೇಷ ಶಿಕ್ಷಣ) ಪದವಿಯನ್ನು ಸಹ ಪರಿಗಣಿಸಲಾಗಿದೆ.

3) ಮೇಲ್ಕಾಣಿಸಿದ ಕನಿಷ್ಠ ವಿದ್ಯಾರ್ಹತೆಗಳು ಭಾಷೆ, ಗಣಿತ, ವಿಜ್ಞಾನ ಹಾಗೂ ಸಮಾಜ ವಿಜ್ಞಾನ ವಿಷಯಗಳನ್ನು ಬೋಧಿಸಲ್ಪಡುವ ಶಿಕ್ಷಕರಿಗೆ ಮಾತ್ರ ಅನ್ವಯಿಸುತ್ತದೆ.

4) ಎರಡು ವರ್ಷಗಳ ಡಿ.ಎಲ್.ಇಡಿ ಕೋರ್ಸಿನ ದ್ವಿತೀಯ ವರ್ಷದ ವಾರ್ಷಿಕ/ಅಂತಿಮ ಪರೀಕ್ಷೆಗೆ ಹಾಜರಾಗಿ ಫಲಿತಾಂಶ ನಿರೀಕ್ಷೆಯಲ್ಲಿರುವ ಹಾಗೂ ಎರಡು ವರ್ಷದ ಬಿ.ಇಡಿ ಕೋರ್ಸಿನ ಅಂತಿಮ ವರ್ಷದ/ ಅಂತಿಮ ಸೆಮಿಸ್ಟರ್‌ನ ಪರೀಕ್ಷೆಗೆ ಹಾಜರಾಗಿ ಫಲಿತಾಂಶ ನಿರೀಕ್ಷಿಸುತ್ತಿರುವಂತಹ ಅಭ್ಯರ್ಥಿಗಳಿಗೆ ಶಿಕ್ಷಕರ ಅರ್ಹತಾ ಪರೀಕ್ಷೆ ಬರೆಯಲು ತಾತ್ಕಾಲಿಕವಾಗಿ ಅನುಮತಿ ನೀಡಲಾಗಿದ್ದು, ಅಂತಿಮ ವರ್ಷದ/ಸೆಮಿಸ್ಟರ್‌ನ ಪರೀಕ್ಷೆಯಲ್ಲಿ ನಿಗದಿತ ಅಂಕಗಳನ್ನು ಪಡೆದು ಉತ್ತೀರ್ಣತೆ ಹೊಂದಿದಲ್ಲಿ ಮಾತ್ರ ಕರ್ನಾಟಕ ಶಿಕ್ಷಕರ ಅರ್ಹತಾ ಪ್ರಮಾಣ ಪತ್ರ ಮಾನ್ಯ ಮಾಡಲಾಗುವುದು.

5) ಮೇಲ್ಕಂಡ ಯಾವುದೇ ಕನಿಷ್ಟ ವಿದ್ಯಾರ್ಹತೆಗಳನ್ನು ಹೊಂದಿರದ ಅಭ್ಯರ್ಥಿಗಳು "**ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಗೆ**" ಹಾಜರಾಗಲು ಅರ್ಹರಿರುವುದಿಲ್ಲ.

## ೮. ಶಿಕ್ಷಕರ ಅರ್ಹತಾ ಪರೀಕ್ಷೆಯ ವಿಷಯ ಮತ್ತು ಸ್ವರೂಪ

ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯ ಪ್ರಶ್ನೆಪತ್ರಿಕೆ ಪುಸ್ತಿಕೆಯು ಪ್ರತಿ ಪ್ರಶ್ನೆಗೆ ಅಂಕ ಒಂದರಂತೆ ಒಟ್ಟು 150 ಬಹು ಆಯ್ಕೆ ಪ್ರಶ್ನೆಗಳನ್ನು (MCQs) ಒಳಗೊಂಡಿರುತ್ತದೆ. ಪ್ರತಿ ಪ್ರಶ್ನೆಗೆ ನಾಲ್ಕು ಆಯ್ಕೆಗಳಿದ್ದು ಒಂದು ಆಯ್ಕೆ ಮಾತ್ರ ಸರಿಯಾಗಿರುತ್ತದೆ. **ಋಣಾತ್ಮಕ ಮೌಲ್ಯಮಾಪನ** (Negative Evaluation) **ಇರುವುದಿಲ್ಲ**.

**ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯು 2 ಪತ್ರಿಕೆಗಳನ್ನೊಳಗೊಂಡಿದೆ.**

ಪತ್ರಿಕೆ–1: 1 ರಿಂದ 5ನೇ ತರಗತಿ ಬೋಧಿಸಲ್ಪಡುವ ಶಿಕ್ಷಕರಿಗಾಗಿ.

ಪತ್ರಿಕೆ–2: 6 ರಿಂದ 8ನೇ ತರಗತಿ ಬೋಧಿಸಲ್ಪಡುವ ಶಿಕ್ಷಕರಿಗಾಗಿ.

**ಸೂಚನೆ**: **ಅಭ್ಯರ್ಥಿಯು 2 ಹಂತದ (1 ರಿಂದ 5 ಮತ್ತು 6 ರಿಂದ ೮) ತರಗತಿಗಳಲ್ಲಿ ಬೋಧಿಸಲು ಅಪೇಕ್ಷಿಸಿದಲ್ಲಿ ಮೇಲಿನ 2 ಪರೀಕ್ಷೆಗಳಿಗೂ ಹಾಜರಾಗತಕ್ಕದ್ದು.**

### ೮.1. ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ–2022ರ ಪರೀಕ್ಷಾ ವೇಳಾಪಟ್ಟಿ:

| ಪರೀಕ್ಷಾ ದಿನಾಂಕ | ಪತ್ರಿಕೆ | ಪರೀಕ್ಷಾ ಸಮಯ | ಪರೀಕ್ಷಾ ಅವಧಿ |
|---|---|---|---|
| 06/11/2022 | ಪತ್ರಿಕೆ–1 | ಬೆಳಿಗ್ಗೆ 9.30 ರಿಂದ ಮಧ್ಯಾಹ್ನ 12.00 ಗಂಟೆ | 2 ಗಂಟೆ 30 ನಿಮಿಷ |
| | ಪತ್ರಿಕೆ–2 | ಮಧ್ಯಾಹ್ನ 2.00 ರಿಂದ 4.30 ಗಂಟೆ | 2 ಗಂಟೆ 30 ನಿಮಿಷ |

8.2. <u>ಪತ್ರಿಕೆ–1</u>(1 ರಿಂದ 5ನೇ ತರಗತಿ ಬೋಧಿಸಲ್ಪಡುವ ಶಿಕ್ಷಕರಿಗಾಗಿ) : ಪರೀಕ್ಷಾ ಅವಧಿ: 2 ಗಂಟೆ 30 ನಿಮಿಷ

**ವಿಷಯ ಮತ್ತು ಅಂಕಗಳ ವಿವರ**

| ವಿಭಾಗ | ವಿಷಯ | ಪ್ರಶ್ನೆಗಳ ಸಂಖ್ಯೆ | ಒಟ್ಟು ಅಂಕಗಳು |
|---|---|---|---|
| 1 | ಭಾಷೆ–1 (ಕಡ್ಡಾಯ) | 30 ಬಹು ಆಯ್ಕೆ ಪ್ರಶ್ನೆ | 30 ಅಂಕಗಳು |
| 2 | ಭಾಷೆ–2 (ಕಡ್ಡಾಯ) | 30 ಬಹು ಆಯ್ಕೆ ಪ್ರಶ್ನೆ | 30 ಅಂಕಗಳು |
| 3 | ಶಿಶು ವಿಕಸನ ಹಾಗೂ ಬೋಧನಾ ಕ್ರಮ (ಕಡ್ಡಾಯ) | 30 ಬಹು ಆಯ್ಕೆ ಪ್ರಶ್ನೆ | 30 ಅಂಕಗಳು |
| 4 | ಗಣಿತ | 30 ಬಹು ಆಯ್ಕೆ ಪ್ರಶ್ನೆ | 30 ಅಂಕಗಳು |
| 5 | ಪರಿಸರ ಅಧ್ಯಯನ | 30 ಬಹು ಆಯ್ಕೆ ಪ್ರಶ್ನೆ | 30 ಅಂಕಗಳು |
| 6 | ಸಮಾಜ ಅಧ್ಯಯನ (ಗಣಿತ ಮತ್ತು ಪರಿಸರ ಅಧ್ಯಯನ ವಿಷಯಗಳ ಬದಲಾಗಿ ಅಂಥ ವಿದ್ಯಾರ್ಥಿಗಳಿಗೆ ಮಾತ್ರ) | **60 ಬಹು ಆಯ್ಕೆ ಪ್ರಶ್ನೆ** | **60 ಅಂಕಗಳು** |
| | **ಒಟ್ಟು** | **150 ಬಹು ಆಯ್ಕೆ ಪ್ರಶ್ನೆಗಳು** | **150 ಅಂಕಗಳು** |

**<u>ಪ್ರಶ್ನೆಗಳ ಸ್ವರೂಪ ಮತ್ತು ವ್ಯಾಪ್ತಿ:</u>**

- ❖ ಭಾಷೆ–1ಕ್ಕೆ ಸಂಬಂಧಿಸಿದ ಪ್ರಶ್ನೆಗಳು ಬೋಧನಾ ಮಾಧ್ಯಮದ ಭಾಷಾ ಕುಶಲತೆಯನ್ನು ಆಧರಿಸಿರುತ್ತದೆ.
- ❖ ಭಾಷೆ–2ಕ್ಕೆ ಸಂಬಂಧಿಸಿದ ಪ್ರಶ್ನೆಗಳು ಆ ಭಾಷೆಯ ಮೂಲಭೂತ ಅಂಶಗಳು, ಸಂವಹನ ಮತ್ತು ವಿಷಯ ಗ್ರಹಿಕೆಯ ಸಾಮರ್ಥ್ಯವನ್ನು ಆಧರಿಸಿರುತ್ತದೆ.
- ❖ **ಭಾಷೆಗಳನ್ನು ಆಯ್ಕೆ ಮಾಡುವಾಗ ಭಾಷೆ–1ನ್ನು ಹೊರತುಪಡಿಸಿ ಲಭ್ಯವಿರುವ ಭಾಷಾ ಆಯ್ಕೆಗಳಲ್ಲಿ ಯಾವುದಾದರೂ ಒಂದು ಭಾಷೆಯನ್ನು ಆಯ್ಕೆಮಾಡಿಕೊಂಡು ಅದೇ ವಿಷಯವನ್ನು ದೃಢೀಕರಣ ಪೇಜ್‌ನಲ್ಲಿ ನಮೂದಿಸಬೇಕು. ಭಾಷೆ–1 ಮತ್ತು ಭಾಷೆ–2 ಒಂದೇ ಭಾಷೆ ಆಗಿರದಂತೆ ಎಚ್ಚರ ವಹಿಸಬೇಕು. ಅಭ್ಯರ್ಥಿಗಳು ತಮ್ಮ ಆನ್‌ಲೈನ್ ಅರ್ಜಿಯಲ್ಲಿ ಭಾಷೆ–1 ಮತ್ತು ಭಾಷೆ–2ನ್ನು ಸ್ಪಷ್ಟವಾಗಿ ನಮೂದಿಸುವುದು.**
- ❖ ಶಿಶುವಿಕಸನ ಹಾಗೂ ಬೋಧನಾಕ್ರಮ ವಿಷಯದ ಪ್ರಶ್ನೆಗಳು 6 ರಿಂದ 11ರ ವಯೋಮಾನದ ಮಕ್ಕಳ ಮನೋವಿಜ್ಞಾನ ಹಾಗೂ ಬೋಧನಾ ಮತ್ತು ಕಲಿಕೆಯ ಮೇಲೆ ಕೇಂದ್ರೀಕೃತವಾಗಿರುತ್ತವೆ. ವಿಭಿನ್ನ ಕಲಿಕೆಯ ಹಿನ್ನೆಲೆಯುಳ್ಳ ಮಕ್ಕಳ ಅವಶ್ಯಕತೆಗಳು ಹಾಗೂ ಅವರ ಕಲಿಕೆಯ ಮಟ್ಟವನ್ನು ಉತ್ತಮಪಡಿಸುವ ನಿಟ್ಟಿನಲ್ಲಿ ಶಿಕ್ಷಕರು ತಿಳಿದುಕೊಳ್ಳಬೇಕಾದ ಅಂಶಗಳನ್ನು ಒಳಗೊಂಡಿರುತ್ತದೆ.
- ❖ ಗಣಿತ ಮತ್ತು ಪರಿಸರ ಅಧ್ಯಯನಕ್ಕೆ ಸಂಬಂಧಿಸಿದ ಪ್ರಶ್ನೆಗಳು ಆ ವಿಷಯದ ಮೂಲ ಪರಿಕಲ್ಪನೆಗಳು, ಸಮಸ್ಯೆಯನ್ನು ಬಿಡಿಸುವ ಸಾಮರ್ಥ್ಯ ಮತ್ತು ಭಾಷಾ ಬೋಧನಾ ಶಾಸ್ತ್ರದ ಅರ್ಥೈಸಿಕೊಳ್ಳುವಿಕೆಯನ್ನು ಒಳಗೊಂಡಿರುತ್ತದೆ.

- ❖ ಪತ್ರಿಕೆ–1ರಲ್ಲಿನ ಎಲ್ಲಾ ಪ್ರಶ್ನೆಗಳು ಎನ್.ಸಿ.ಇ.ಆರ್.ಟಿ./ ರಾಜ್ಯದ 1 ರಿಂದ 8ನೇ ತರಗತಿಗೆ ಸಂಬಂಧಿಸಿದ ಪಠ್ಯವಸ್ತುವನ್ನು ಆಧರಿಸಿರುತ್ತದೆ. ಪ್ರಶ್ನೆಗಳ ಕಠಿಣತೆಯ ಮಟ್ಟ ಪ್ರೌಢ ಹಂತಕ್ಕೆ (ಹತ್ತನೇ ತರಗತಿಯವರೆಗೆ) ಸೀಮಿತವಾಗಿರುತ್ತದೆ.
- ❖ ಅಂಧ ಅಭ್ಯರ್ಥಿಗಳು (Visually impaired) ಗಣಿತ ಮತ್ತು ಪರಿಸರ ಅಧ್ಯಯನದ ಪ್ರಶ್ನೆಪತ್ರಿಕೆಗೆ ಬದಲಾಗಿ ಸಮಾಜ ವಿಜ್ಞಾನ ಪ್ರಶ್ನೆಪತ್ರಿಕೆಯಲ್ಲಿನ 60 ಪ್ರಶ್ನೆಗಳಿಗೆ ಉತ್ತರಿಸತಕ್ಕದ್ದು.

**8.3. ಪತ್ರಿಕೆ–2 (6 ರಿಂದ 8ನೇ ತರಗತಿ ಬೋಧಿಸಲ್ಪಡುವ ಶಿಕ್ಷಕರಿಗಾಗಿ): ಪರೀಕ್ಷಾ ಅವಧಿ: 2 ಗಂಟೆ 30 ನಿಮಿಷ**

**ವಿಷಯ ಮತ್ತು ಅಂಕಗಳ ವಿವರ**

| **ವಿಭಾಗ** | **ವಿಷಯ** | **ಪ್ರಶ್ನೆಗಳ ಸಂಖ್ಯೆ** | **ಒಟ್ಟು ಅಂಕಗಳು** |
|---|---|---|---|
| 1 | ಭಾಷೆ–1(ಕಡ್ಡಾಯ) | 30 ಬಹು ಆಯ್ಕೆ ಪ್ರಶ್ನೆ | 30 ಅಂಕಗಳು |
| 2 | ಭಾಷೆ–2(ಕಡ್ಡಾಯ) | 30 ಬಹು ಆಯ್ಕೆ ಪ್ರಶ್ನೆ | 30 ಅಂಕಗಳು |
| 3 | ಶಿಶು ವಿಕಸನ ಹಾಗೂ ಬೋಧನಾ ಕ್ರಮ (ಕಡ್ಡಾಯ) | 30 ಬಹು ಆಯ್ಕೆ ಪ್ರಶ್ನೆ | 30 ಅಂಕಗಳು |
| 4 | ಗಣಿತ ಮತ್ತು ವಿಜ್ಞಾನ<br>(ಗಣಿತ ಮತ್ತು ವಿಜ್ಞಾನ ಶಿಕ್ಷಕರಿಗಾಗಿ) | **60 ಬಹು ಆಯ್ಕೆ ಪ್ರಶ್ನೆ** | **60 ಅಂಕಗಳು** |
| 5 | ಸಮಾಜ ಪಾಠಗಳು / ಸಮಾಜ ವಿಜ್ಞಾನ (ಸಮಾಜ ವಿಜ್ಞಾನ ಶಿಕ್ಷಕರಿಗಾಗಿ) | **60 ಬಹು ಆಯ್ಕೆ ಪ್ರಶ್ನೆ** | **60 ಅಂಕಗಳು** |
| | **ಒಟ್ಟು** | **150 ಬಹು ಆಯ್ಕೆ ಪ್ರಶ್ನೆಗಳು** | **150 ಅಂಕಗಳು** |

**<u>ಪ್ರಶ್ನೆಗಳ ಸ್ವರೂಪ ಮತ್ತು ವ್ಯಾಪ್ತಿ:</u>**

- ಭಾಷೆ–1ಕ್ಕೆ ಸಂಬಂಧಿಸಿದ ಪ್ರಶ್ನೆಗಳು ಬೋಧನಾ ಮಾಧ್ಯಮದ ಭಾಷಾ ಕುಶಲತೆಯನ್ನು ಆಧರಿಸಿರುತ್ತದೆ.
- ಭಾಷೆ–2ಕ್ಕೆ ಸಂಬಂಧಿಸಿದ ಪ್ರಶ್ನೆಗಳು ಆ ಭಾಷೆಯ ಮೂಲಭೂತ ಅಂಶಗಳು, ಸಂವಹನ ಮತ್ತು ವಿಷಯ ಗ್ರಹಿಕೆಯ ಸಾಮರ್ಥ್ಯವನ್ನು ಆಧರಿಸಿರುತ್ತದೆ.
- **ಭಾಷೆಗಳನ್ನು ಆಯ್ಕೆ ಮಾಡುವಾಗ ಭಾಷೆ–1ನ್ನು ಹೊರತುಪಡಿಸಿ ಲಭ್ಯವಿರುವ ಭಾಷಾ ಆಯ್ಕೆಗಳಲ್ಲಿ ಯಾವುದಾದರೂ ಒಂದು ಭಾಷೆಯನ್ನು ಆಯ್ಕೆಮಾಡಿಕೊಂಡು ಅದೇ ವಿಷಯವನ್ನು ದೃಢೀಕರಣ ಪೇಜ್‌ನಲ್ಲಿ ನಮೂದಿಸಬೇಕು. ಭಾಷೆ–1 ಮತ್ತು ಭಾಷೆ–2 ಒಂದೇ ಭಾಷೆ ಆಗಿರದಂತೆ ಎಚ್ಚರ ವಹಿಸಬೇಕು. ಅಭ್ಯರ್ಥಿಗಳು ತಮ್ಮ ಆನ್‌ಲೈನ್ ಅರ್ಜಿಯಲ್ಲಿ ಭಾಷೆ–1 ಮತ್ತು ಭಾಷೆ–2ನ್ನು ಸ್ಪಷ್ಟವಾಗಿ ನಮೂದಿಸುವುದು.**
- ಶಿಶು ವಿಕಸನ ಹಾಗೂ ಬೋಧನಾಕ್ರಮ ವಿಷಯದ ಪ್ರಶ್ನೆಗಳು 11 ರಿಂದ 14ರ ವಯೋಮಾನದ ಮಕ್ಕಳ ಮನೋವಿಜ್ಞಾನ ಹಾಗೂ ಬೋಧನಾ ಮತ್ತು ಕಲಿಕೆಯ ಮೇಲೆ ಕೇಂದ್ರೀಕೃತವಾಗಿರುತ್ತದೆ.
- ಗಣಿತ, ವಿಜ್ಞಾನ ಮತ್ತು ಸಮಾಜ ಪಾಠಗಳು/ಸಮಾಜ ವಿಜ್ಞಾನ ವಿಷಯಕ್ಕೆ ಸಂಬಂಧಿಸಿದ ಪ್ರಶ್ನೆಗಳು ಆ ವಿಷಯದ ಮೂಲ ಪರಿಕಲ್ಪನೆಗಳು, ಸಮಸ್ಯೆಯನ್ನು ಬಿಡಿಸುವ ಸಾಮರ್ಥ್ಯ ಮತ್ತು ಭಾಷಾ ಬೋಧನಾ ಶಾಸ್ತ್ರದ ಅರ್ಥೈಸಿಕೊಳ್ಳುವಿಕೆಯನ್ನು ಒಳಗೊಂಡಿರುತ್ತದೆ. ಪರೀಕ್ಷಾ

ಪ್ರಶ್ನೆಗಳು ಗಣಿತ ಮತ್ತು ವಿಜ್ಞಾನ ವಿಷಯಗಳಲ್ಲಿ ಪ್ರತಿ ವಿಷಯದಲ್ಲಿ 30 ಅಂಕಗಳ ಪ್ರಶ್ನೆಗಳಿರುತ್ತವೆ.

- ವಿಭಿನ್ನ ಕಲಿಕೆಯ ಹಿನ್ನೆಲೆಯುಳ್ಳ ಮಕ್ಕಳ ಅವಶ್ಯಕತೆಗಳು ಹಾಗೂ ಅವರ ಕಲಿಕೆಯ ಮಟ್ಟವನ್ನು ಉತ್ತಮಪಡಿಸುವ ನಿಟ್ಟಿನಲ್ಲಿ ಶಿಕ್ಷಕರು ತಿಳಿದುಕೊಳ್ಳಬೇಕಾದ ಅಂಶಗಳನ್ನು ಒಳಗೊಂಡಿರುತ್ತದೆ.
- ಪತ್ರಿಕೆ–2ರಲ್ಲಿನ ಎಲ್ಲಾ ಪ್ರಶ್ನೆಗಳು ಎನ್.ಸಿ.ಇ.ಆರ್.ಟಿ. / ರಾಜ್ಯದ 6 ರಿಂದ 10ನೇ ತರಗತಿಗೆ ಸಂಬಂಧಿಸಿದ ಪಠ್ಯವಸ್ತುವನ್ನು ಆಧರಿಸಿದ್ದು, ಆದರೆ ಪ್ರಶ್ನೆಗಳ ಕಠಿಣತೆಯ ಮಟ್ಟ ಹಿರಿಯ ಪ್ರೌಢ ಹಂತಕ್ಕೆ (PUC) ಸೀಮಿತವಾಗಿರುತ್ತದೆ.

9. **<u>ಪ್ರಶ್ನೆ ಪತ್ರಿಕೆಯ ಮಾಧ್ಯಮ</u>:**

ಭಾಷಾ ವಿಷಯಗಳ ಹೊರತಾಗಿ ಉಳಿದ ಎಲ್ಲಾ ವಿಷಯಗಳ ಪ್ರಶ್ನೆಗಳನ್ನು ಕನ್ನಡ, ಇಂಗ್ಲಿಷ್, ಉರ್ದು, ತಮಿಳು, ತೆಲುಗು, ಹಿಂದಿ ಮತ್ತು ಮರಾಠಿ ಮಾಧ್ಯಮಗಳಲ್ಲಿ ಮುದ್ರಿಸಲಾಗಿರುತ್ತದೆ.

10. **<u>ಅರ್ಹತಾ ಅಂಕಗಳು ಹಾಗೂ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯ ಪ್ರಮಾಣ ಪತ್ರ</u>:**

10.1 ಅಧಿಸೂಚನೆಯಲ್ಲಿ ತಿಳಿಸಿರುವಂತೆ ಸಾಮಾನ್ಯ ವರ್ಗ/2ಎ/2ಬಿ/3ಎ/3ಬಿ ಗುಂಪುಗಳಿಗೆ ಸೇರಿರುವ ಅಭ್ಯರ್ಥಿಗಳು ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ ಕನಿಷ್ಟ ಶೇ. 60% ರಷ್ಟು ಅರ್ಹತಾ ಅಂಕಗಳನ್ನು ಪಡೆಯಬೇಕು.
ಪ.ಜಾತಿ/ಪ.ವರ್ಗ/ಪ್ರವರ್ಗ–1 ಹಾಗೂ ವಿಶೇಷ ಅಗತ್ಯವುಳ್ಳ ಅಭ್ಯರ್ಥಿಗಳು ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ ಕನಿಷ್ಟ ಶೇ. 55 ರಷ್ಟು ಅರ್ಹತಾ ಅಂಕಗಳನ್ನು ಪಡೆಯಬೇಕು.

10.2 ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ ಕನಿಷ್ಠ ಅರ್ಹತಾ ಅಂಕಗಳನ್ನು ಗಳಿಸಿದ ಅಭ್ಯರ್ಥಿಗಳಿಗೆ ಗಣಕೀಕೃತ ಅಂಕಪಟ್ಟಿ ವಿತರಿಸಲಾಗುವುದು. ಕೇಂದ್ರೀಕೃತ ದಾಖಲಾತಿ ಘಟಕದಿಂದ ಈ ಸಂಬಂಧ ಮುದ್ರಿತ ಅಂಕಪಟ್ಟಿಯನ್ನು ವಿತರಿಸುವುದಿಲ್ಲ. ಬದಲಾಗಿ ಅಭ್ಯರ್ಥಿಗಳು ವೆಬ್‌ಸೈಟ್‌ನಲ್ಲಿ ನೀಡಲಾದ ಲಿಂಕ್ ಮೂಲಕ ಸುರಕ್ಷತಾ ಕೋಡ್ ಹೊಂದಿರುವ ಗಣಕೀಕೃತ ಪ್ರಮಾಣ ಪತ್ರ ಪ್ರತಿಯನ್ನು ಪಡೆದುಕೊಳ್ಳಬಹುದಾಗಿದೆ. ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿರುವಂತೆ ನೋಂದಣಿ/ಅರ್ಜಿಸಂಖ್ಯೆ ಮತ್ತು ಅಭ್ಯರ್ಥಿಯ ಜನ್ಮದಿನಾಂಕ (ಆನ್‌ಲೈನ್ ಅರ್ಜಿಯಲ್ಲಿರುವಂತೆ) ನಮೂದಿಸಿ ಗಣಕೀಕೃತ ಪ್ರಮಾಣ ಪತ್ರವನ್ನು ಪಡೆದುಕೊಳ್ಳಬಹುದು.

10.3 ಅಭ್ಯರ್ಥಿಗಳು ಫಲಿತಾಂಶ ಪ್ರಕಟವಾದ ಎರಡು ವಾರಗಳ ನಂತರ ಇಲಾಖಾ ವೆಬ್‌ಸೈಟ್‌ನಲ್ಲಿ ನೀಡಲಾಗುವ ಲಿಂಕ್ ಮೂಲಕ **ತಮ್ಮ ಪ್ರಮಾಣ ಪತ್ರವನ್ನು ಬೇಕಾದಷ್ಟು ಸಂಖ್ಯೆಯಲ್ಲಿ** ಪಡೆದುಕೊಳ್ಳಬಹುದಾಗಿದ್ದು, ಈ ಸಂಬಂಧ ಕಚೇರಿಯನ್ನು ಪದೇ ಪದೇ ಸಂಪರ್ಕಿಸುವ ಅಗತ್ಯವಿರುವುದಿಲ್ಲ. ಪ್ರಮಾಣ ಪತ್ರದಲ್ಲಿ ಮುದ್ರಿತವಾಗಿರುವ QR Code ಅನ್ನು ಸ್ಕ್ಯಾನ್ ಮಾಡುವುದರ ಮೂಲಕ ಪ್ರಮಾಣ ಪತ್ರದ ನೈಜತೆಯನ್ನು ದೃಢೀಕರಿಸಿಕೊಳ್ಳಬಹುದಾಗಿದೆ.

11. **ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿನ ಅರ್ಹತೆಯು ಶಿಕ್ಷಕರ ನೇಮಕಾತಿಯ ಒಂದು ಭಾಗವೇ ಹೊರತು, ನೇಮಕಾತಿಯ ಹಕ್ಕು ಅಲ್ಲ ಎಂಬ ಅಂಶವನ್ನು ಅಭ್ಯರ್ಥಿಗಳು ಮನಗಾಣಬೇಕು**.

12. ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯ ಪ್ರಶ್ನೆಪತ್ರಿಕೆಗಳನ್ನು ವಿಷಯ ಪರಿಣಿತರ ಸಮಿತಿಯಿಂದ ಪರೀಕ್ಷಾ ಗೌಪ್ಯತೆಯ ನಿಯಮಗಳಿಗೆ ಒಳಪಟ್ಟು ಸಿದ್ಧಪಡಿಸಲಾಗುವುದು. ಮುದ್ರಣಕ್ಕೆ ಮುಂಚಿತವಾಗಿ

ಸದರಿ ಪ್ರಶ್ನೆಪತ್ರಿಕೆಗಳನ್ನು ಮತ್ತೊಮ್ಮೆ ಪರಿಶೀಲಿಸಿ Validation ಮಾಡಲಾಗುವುದು. ಆದಾಗ್ಯೂ ಸಹ ಪ್ರಶ್ನೆಪತ್ರಿಕೆಗಳಲ್ಲಿನ ಪ್ರಶ್ನೆ/ಆಯ್ಕೆಗಳಲ್ಲಿ ತಪ್ಪುಗಳಿದ್ದಲ್ಲಿ ಅಥವಾ ಮುದ್ರಣ ದೋಷದಿಂದಾಗಿ ತಪ್ಪುಗಳಾಗಿದ್ದಲ್ಲಿ ವಿಷಯ ಪರಿಣಿತರ ಸಮಿತಿಯ (Subject Experts Committee) ತೀರ್ಮಾನದಂತೆ ಅಂತಹ ಪ್ರಶ್ನೆಗಳನ್ನು ಮೌಲ್ಯಮಾಪನಕ್ಕೆ ಪರಿಗಣಿಸದೇ Delete ಮಾಡಲಾಗುವುದು **ಹಾಗೂ** ಮೌಲ್ಯಮಾಪನಕ್ಕೆ ಪರಿಗಣಿಸದ ಪ್ರಶ್ನೆಗಳಿಗೆ ಯಾವುದೇ ಕೃಪಾಂಕಗಳನ್ನು (Grace Marks) ನೀಡಲಾಗುವುದಿಲ್ಲ. Delete ಮಾಡಲಾದ ಪ್ರಶ್ನೆಗಳನ್ನು ಹೊರತುಪಡಿಸಿ, ಉಳಿದ ಪ್ರಶ್ನೆಗಳ ಸಂಖ್ಯೆಯನ್ನಾಧರಿಸಿ ಪತ್ರಿಕೆವಾರು ಅರ್ಹತಾ ಅಂಕಗಳನ್ನು ನಿರ್ಧರಿಸಲಾಗುವುದು. ಪ್ರಶ್ನೆಪತ್ರಿಕೆಗಳಲ್ಲಿನ ಪ್ರಶ್ನೆ/ಆಯ್ಕೆಗಳಲ್ಲಿ ತಪ್ಪುಗಳಿದ್ದಲ್ಲಿ ಅಥವಾ ಮುದ್ರಣ ದೋಷದಿಂದಾಗುವ ತಪ್ಪುಗಳಿಗೆ ಸಂಬಂಧಿಸಿದಂತೆ ವಿಷಯ ಪರಿಣಿತರ ಸಮಿತಿಯ (Subject Experts Committee) ತೀರ್ಮಾನವೇ ಅಂತಿಮವಾಗಿರುತ್ತದೆ.

13. **ಅನ್ವಯತೆ:**

ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯ ಪ್ರಮಾಣ ಪತ್ರವು ಕರ್ನಾಟಕ ರಾಜ್ಯ ಸರ್ಕಾರ ನಡೆಸುತ್ತಿರುವ ಸರ್ಕಾರಿ/ಸ್ಥಳೀಯ ಸಂಸ್ಥೆಗಳಿಂದ ನಡೆಸಲ್ಪಡುತ್ತಿರುವ ಶಾಲೆಗಳು, ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಿಗೆ ಅನ್ವಯಿಸುತ್ತದೆ.

14. **ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯ (KARTET) ಪ್ರಮಾಣ ಪತ್ರದ ಮಾನ್ಯತೆ:**

- **ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯ ಪ್ರಮಾಣ ಪತ್ರವು** ಜೀವಿತಾವಧಿಯವರೆಗೆ ಮಾನ್ಯತೆಯನ್ನು ಹೊಂದಿರುತ್ತದೆ.
- ಅಭ್ಯರ್ಥಿಗಳು ಎಷ್ಟು ಬಾರಿಯಾದರೂ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಗೆ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಪರೀಕ್ಷೆಯಲ್ಲಿ ನಿಗದಿತ ಅರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ಸಹ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳನ್ನು ಗಳಿಸುವ ಸಲುವಾಗಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

15. **ಸ್ಕ್ರೈಬ್ (ಪರೀಕ್ಷಾ ಸಹಾಯಕರು):**

**ಭಾರತ ಸರ್ಕಾರ, ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ಮತ್ತು ಅಂಗವೈಕಲ್ಯ ಮಾರ್ಗಸೂಚಿಗಳ ಇಲಾಖೆಯ ಮಾರ್ಗಸೂಚಿಯನ್ವಯ** OMF. No.16-110/2003-DD.III dated 26-02-2013 ರ ಅನ್ವಯ KARTET ಪರೀಕ್ಷೆ ನಡೆಸುವ ಸಲುವಾಗಿ ಕೆಳಗಿನ ನಿಯಮಗಳು ವಿಶೇಷಚೇತನ ಅಭ್ಯರ್ಥಿಗಳಿಗೆ ಅನ್ವಯಿಸುತ್ತವೆ.

- ❖ ಪರೀಕ್ಷಾ ಸಹಾಯಕರನ್ನು ಬಳಸಿಕೊಂಡು KARTET-2022ರ ಪರೀಕ್ಷೆ ಬರೆಯುತ್ತಿರುವ ವಿಶೇಷ ಅಗತ್ಯತೆವುಳ್ಳ ಅಭ್ಯರ್ಥಿಗಳಿಗೆ ಪ್ರತಿ ಪತ್ರಿಕೆಗೆ 50 ನಿಮಿಷಗಳ (ಪ್ರತಿ ಘಂಟೆಗೆ 20 ನಿಮಿಷದಂತೆ) ಹೆಚ್ಚಿನ ಕಾಲಾವಕಾಶವನ್ನು ನೀಡಲಾಗುವುದು. ಪರೀಕ್ಷಾ ಸಹಾಯಕರನ್ನು ಬಳಸಿಕೊಳ್ಳದ ಇತರೆ ವಿಶೇಷ ಅಗತ್ಯತೆವುಳ್ಳ ಅಭ್ಯರ್ಥಿಗಳಿಗೂ ಸಹ ಪ್ರತಿ ಪತ್ರಿಕೆಗೆ 50 ನಿಮಿಷಗಳ (ಪ್ರತಿ ಘಂಟೆಗೆ 20 ನಿಮಿಷದಂತೆ) ಹೆಚ್ಚಿನ ಕಾಲಾವಕಾಶದ ಸೌಲಭ್ಯವನ್ನು ನೀಡಲಾಗುವುದು.
- ❖ ಶೇ. 40ಕ್ಕೂ ಹೆಚ್ಚು ಅಂಗವೈಕಲ್ಯವನ್ನು ಹೊಂದಿರುವ ವಿಶೇಷ ಅಗತ್ಯತೆಯುಳ್ಳ ಅಭ್ಯರ್ಥಿಗಳು ಇಚ್ಛಿಸಿದಲ್ಲಿ ಪರೀಕ್ಷಾ ಸಹಾಯಕರನ್ನು ಬಳಸಿಕೊಳ್ಳಲು ಅವಕಾಶವಿರುತ್ತದೆ.
- ❖ ಅಭ್ಯರ್ಥಿಗಳು ತಮ್ಮ ಅಗತ್ಯತೆಗನುಗುಣವಾಗಿ ಪರೀಕ್ಷಾ ಸಹಾಯಕರನ್ನು ತಾವೇ ನೇಮಿಸಿಕೊಳ್ಳುವುದು ಅಥವಾ ಪರೀಕ್ಷಾ ಕೇಂದ್ರದ ಮುಖ್ಯಸ್ಥರಿಗೆ ಪರೀಕ್ಷಾ ಸಹಾಯಕರನ್ನು

ಒದಗಿಸಲು ಮನವಿ ಮಾಡಿಕೊಳ್ಳುವುದು. ಪರೀಕ್ಷಾ ದಿನಾಂಕಕ್ಕಿಂತ ಒಂದು ದಿನ ಮುಂಚಿತವಾಗಿ ಸಂಬಂಧಪಟ್ಟ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರಿಗೆ ಮನವಿ ಸಲ್ಲಿಸಿ ಅನುಮೋದನೆ ಪಡೆದುಕೊಳ್ಳುವುದು.

❖ **ಲಿಪಿಕಾರನನ್ನು (ಸ್ಕ್ರೈಬ್) ಒದಗಿಸಿದಲ್ಲಿ ಆತನ ವಿದ್ಯಾರ್ಹತೆಯು ಪರೀಕ್ಷೆಗೆ ನಿಗದಿಪಡಿಸಿರುವ ಕನಿಷ್ಟ ವಿದ್ಯಾರ್ಹತೆಗಿಂತ ಹೆಚ್ಚಿರಬಾರದು. ಆದಾಗ್ಯೂ ಲಿಪಿಕಾರನು (ಸ್ಕ್ರೈಬ್) ಹೊಂದಿರುವ ವಿದ್ಯಾರ್ಹತೆಯು ಎಸ್ ಎಸ್ ಎಲ್ ಸಿ ಅಥವಾ ತತ್ಸಮಾನ ಪರೀಕ್ಷೆಗಿಂತ ಕಡಿಮೆ ಇರತಕ್ಕದ್ದಲ್ಲ. ಆದರೆ, ತನ್ನದೇ ಆದ ಲಿಪಿಕಾರನನ್ನು (ಸ್ಕ್ರೈಬ್) ಕರೆತರಲು ಅಭ್ಯರ್ಥಿಗೆ ಅವಕಾಶ ಕಲ್ಪಿಸಿದಲ್ಲಿ, ಅಂತಹ ಲಿಪಿಕಾರನು (ಸ್ಕ್ರೈಬ್) ಹೊಂದಿರುವ ವಿದ್ಯಾರ್ಹತೆಯು ಸದರಿ ಅಭ್ಯರ್ಥಿಯು ಹೊಂದಿರುವ ವಿದ್ಯಾರ್ಹತೆಗಿಂತ ಒಂದು ಹಂತ ಕೆಳಗಿರಬೇಕು. ಇದಕ್ಕಾಗಿ ಅಭ್ಯರ್ಥಿಯು ಲಿಪಿಕಾರನ ವಿವರಗಳನ್ನು ಸಲ್ಲಿಸತಕ್ಕದ್ದು. ಪರೀಕ್ಷಾ ಮೇಲ್ವಿಚಾರಣೆ ವ್ಯವಸ್ಥೆಯನ್ನು ಬಲಗೊಳಿಸಿ ಅಭ್ಯರ್ಥಿಗಳಿಗೆ ನೀಡಲಾಗಿರುವ ಪರೀಕ್ಷಾ ಸಹಾಯಕರು ಯಾವುದೇ ರೀತಿಯ ಪರೀಕ್ಷಾ ಅವ್ಯವಹಾರದಲ್ಲಿ (ನಕಲು ಅಥವಾ ಇನ್ನ್ಯಾವುದೇ ರೀತಿಯ ಅನಪೇಕ್ಷಿತ ವರ್ತನೆ) ತೊಡಗುವುದನ್ನು ಕಟ್ಟುನಿಟ್ಟಾಗಿ ನಿರ್ಬಂಧಿಸಿದೆ.**

❖ ಮುಖ್ಯ ಅಧೀಕ್ಷಕರು ವಿಶೇಷ ಅಗತ್ಯತೆವುಳ್ಳ ಅಭ್ಯರ್ಥಿಗಳಿಗೆ ಪರೀಕ್ಷೆ ಪ್ರಾರಂಭಕ್ಕಿಂತ ಮುಂಚೆ ಕೆಳಮಹಡಿಯಲ್ಲಿ ಪರೀಕ್ಷೆ ಬರೆಯಲು ಸೂಕ್ತವಾದ ಸ್ಥಳಾವಕಾಶವನ್ನು ಕಲ್ಪಿಸುವುದು.

**16. ದಾಖಲೆಗಳ ಸಂರಕ್ಷಣೆ:**

KARTET -2022 ರ ದಾಖಲೆಗಳನ್ನು ಹಾಗೂ ಅಭ್ಯರ್ಥಿಗಳ ಓ.ಎಂ.ಆರ್. ಉತ್ತರ ಪತ್ರಿಕೆಗಳನ್ನು ಪರೀಕ್ಷಾ ಫಲಿತಾಂಶ ಪ್ರಕಟಣೆ ನಂತರ ಪರೀಕ್ಷಾ ನಿಯಮಾನುಸಾರ ಕೇಂದ್ರೀಕೃತ ದಾಖಲಾತಿ ಘಟಕದಲ್ಲಿ **ಎರಡು ತಿಂಗಳ ಕಾಲ** ಸಂರಕ್ಷಿಸಿ ಇಡಲಾಗುವುದು.

**17. ಕಾನೂನಿನ ಪರಿಮಿತಿ:**

KARTET–2022 ರ ಪರೀಕ್ಷೆಗೆ ಸಂಬಂಧಿಸಿದ ಎಲ್ಲಾ ವ್ಯಾಜ್ಯಗಳು ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಕೇಂದ್ರೀಕೃತ ದಾಖಲಾತಿ ಘಟಕದ ವಿಶೇಷಾಧಿಕಾರಿಗಳು ಕಾನೂನಾತ್ಮಕ ವ್ಯಕ್ತಿಯಾಗಿದ್ದು, ಅವರ ಹೆಸರಿನಲ್ಲಿ ಕೇಂದ್ರೀಕೃತ ದಾಖಲಾತಿ ಘಟಕವು ಯಾವುದೇ KARTET–2022 ರ ವ್ಯಾಜ್ಯಗಳನ್ನು ನ್ಯಾಯಾಲಯದಲ್ಲಿ ವ್ಯವಹರಿಸುವುದು.

**18. ಪ್ರಮುಖ ಸೂಚನೆಗಳು:**

❖ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಮಾತ್ರ ಅರ್ಜಿಗಳನ್ನು ಸಲ್ಲಿಸಬೇಕು. ಅಭ್ಯರ್ಥಿಗಳು ಪ್ರವೇಶ ಪತ್ರವನ್ನು ಸಹ ಆನ್‌ಲೈನ್ ಮೂಲಕವೇ ಪಡೆಯತಕ್ಕದ್ದು. ಅಭ್ಯರ್ಥಿಯು ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ ಹಾಜರಾದ ಮಾತ್ರಕ್ಕೆ ಅರ್ಹತೆಯನ್ನು ಪಡೆಯುವುದಿಲ್ಲ. ಅಭ್ಯರ್ಥಿಯು ವಿದ್ಯಾರ್ಹತೆ, ಆಯಾ ಗುಂಪುಗಳಿಗೆ ನಿಗದಿಪಡಿಸಿರುವ ಕನಿಷ್ಟ ಅರ್ಹತಾ ಅಂಕಗಳನ್ನು ಪಡೆಯತಕ್ಕದ್ದು.

❖ ಅರ್ಜಿಗಳನ್ನು ದಿನಾಂಕ:30/09/2022 ರೊಳಗೆ ಆನ್‌ಲೈನ್ ಮೂಲಕವೇ ಸಲ್ಲಿಸಬೇಕು. ಅಂತಿಮ ದಿನಾಂಕದ ನಂತರ ಅರ್ಜಿಸಲ್ಲಿಸಲು ಅವಕಾಶ ಇರುವುದಿಲ್ಲ. ಅಂಚೆ ಅಥವಾ ಇನ್ನ್ಯಾವುದೇ ವಿಧಾನದಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

❖ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿಗಳಿಗೆ ಸಲ್ಲಿಸಿರುವ ಸಂಬಂಧಿತ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು.

❖ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ಭರ್ತಿ ಮಾಡಿರುವ ಮಾಹಿತಿಗಳ ಆಧಾರದ ಮೇಲೆ ಅವರಿಗೆ ಅರ್ಹತಾ ಪರೀಕ್ಷೆ ಬರೆಯಲು ಪ್ರವೇಶ ಪತ್ರಗಳನ್ನು ನೀಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಿದ್ಯಾರ್ಹತೆ, ನಿಗದಿಪಡಿಸಲಾದ ಶೈಕ್ಷಣಿಕ ಅರ್ಹತೆಯ ಅಂಕಗಳ ಮಾಹಿತಿ, ಮೀಸಲಾತಿ, ಜನ್ಮದಿನಾಂಕ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ ಸಂದರ್ಭಗಳಲ್ಲಿ ಮುಂದಿನ ಆಗು ಹೋಗುಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರು.

❖ ಆನ್‌ಲೈನ್ ಅರ್ಜಿಯಲ್ಲಿ ಸಲ್ಲಿಸಿದ ತಪ್ಪು ಮಾಹಿತಿಯ ಆಧಾರದ ಮೇಲೆ ಅಭ್ಯರ್ಥಿಯು ಅರ್ಹತೆ ಹೊಂದಿದ್ದಲ್ಲಿ ಅಥವಾ ಪರೀಕ್ಷೆಯಲ್ಲಿ ಪರೀಕ್ಷಾ ನಿಯಮಗಳನ್ನು ಉಲ್ಲಂಘಿಸಿದ ಕಾರಣಗಳಿಗಾಗಿ ಅಭ್ಯರ್ಥಿಯ ಅರ್ಹತೆಯನ್ನು / ಪಡೆದಿರುವ ಅರ್ಹತಾ ಪ್ರಮಾಣ ಪತ್ರವನ್ನು ರದ್ದುಗೊಳಿಸುವ ಅಧಿಕಾರವನ್ನು ವಿಶೇಷಾಧಿಕಾರಿ, ಕೇಂದ್ರೀಕೃತ ದಾಖಲಾತಿ ಘಟಕ. ಇವರು ಕಾಯ್ದಿರಿಸಿಕೊಂಡಿರುತ್ತಾರೆ.

❖ ಸದರಿ ಅರ್ಹತಾ ಪರೀಕ್ಷೆಯು ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ನಿಯಮಗಳು, ಆದೇಶಗಳು ಮತ್ತು ತಿದ್ದುಪಡಿಗೆ ಒಳಪಟ್ಟಿರುತ್ತದೆ.

❖ ಅಭ್ಯರ್ಥಿಗಳು ಸಲ್ಲಿಸಿದ ಆನ್‌ಲೈನ್ ಅರ್ಜಿಯ ಪ್ರತಿ, ಪ್ರವೇಶ ಪತ್ರ, ಶುಲ್ಕ ಪಾವತಿಸಿದ ಚಲನ್‌ಪ್ರತಿ ಹಾಗೂ ಇತರೆ ದಾಖಲೆಗಳನ್ನು ಸದರಿ ಶಿಕ್ಷಕರ ಅರ್ಹತಾ ಪರೀಕ್ಷಾ ಪ್ರಕ್ರಿಯೆ ಮುಗಿಯುವ ತನಕ ಸುರಕ್ಷಿತವಾಗಿ ಇಟ್ಟುಕೊಳ್ಳತಕ್ಕದ್ದು.

❖ **ದುರ್ನಡತೆ**: ಒಬ್ಬ ಅಭ್ಯರ್ಥಿಯು ನಕಲು ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತನೆ ಎಸಗಿದ ಅಥವಾ ಪರೀಕ್ಷಾ ನಿಯಮಗಳನ್ನು ಅಥವಾ ಪರೀಕ್ಷಾ ಗೌಪ್ಯತೆಯನ್ನು ಉಲ್ಲಂಘಿಸಿದ ಬಗ್ಗೆ ತಪ್ಪಿತಸ್ಥನೆಂದು ಕಂಡುಬಂದಲ್ಲಿ ಅಥವಾ ಕೇಂದ್ರೀಕೃತ ದಾಖಲಾತಿ ಘಟಕದಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದೇ ಅಲ್ಲದೇ, ಕೇಂದ್ರೀಕೃತ ದಾಖಲಾತಿ ಘಟಕವು ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಅನರ್ಹರಾಗುತ್ತಾನೆ/ಳೆ.

❖ ಅರ್ಹತೆ ಪಡೆದ ಅಭ್ಯರ್ಥಿಗಳ ಪ್ರಮಾಣ ಪತ್ರಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಲಭ್ಯಗೊಳಿಸಿದ ನಂತರ ಅಭ್ಯರ್ಥಿಗಳು ತಮ್ಮ ಮನವಿ/ ಆಕ್ಷೇಪಣೆ ಸಲ್ಲಿಸುವಾಗ ಮೂಲ ಅರ್ಜಿಯಲ್ಲಿ ದಾಖಲಿಸಿದ ವಿಷಯಗಳಿಗೆ ಸಂಬಂಧಿಸಿದಂತೆ ಮಾತ್ರ ಸಲ್ಲಿಸಬಹುದು. ಅರ್ಜಿಯಲ್ಲಿ ನಮೂದಿಸಲು ಬಿಟ್ಟುಹೋಗಿದ್ದ ಯಾವುದೇ ಮಾಹಿತಿಯನ್ನು ಹೊಸದಾಗಿ ದಾಖಲಿಸಲು ಅವಕಾಶವಿರುವುದಿಲ್ಲ. ಅಂತಹ ಆಕ್ಷೇಪಣೆ ಮತ್ತು ಲಗತ್ತುಗಳನ್ನು ಪರಿಗಣಿಸಲಾಗುವುದಿಲ್ಲ.

## 19. KARTET-2022 ರಲ್ಲಿನ ಪ್ರಮುಖ ವಿಷಯಗಳು

| | | |
|---|---|---|
| 1 | ಆನ್ ಲೈನ್ ಅರ್ಜಿಯನ್ನು ವೆಬ್ ವಿಳಾಸ www.schooleducation.kar.nic.in ಮೂಲಕ ಸಲ್ಲಿಸುವುದು | 01/09/2022 ರಿಂದ 30/09/2022 |
| 2 | ಶುಲ್ಕ ಪಾವತಿಸಲು ಕೊನೆಯ ದಿನಾಂಕ | 30/09/2022 |
| 3 | ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳುವ ಅವಧಿ | 21/10/2022 ರಿಂದ ಪರೀಕ್ಷಾ ದಿನಾಂಕದವರೆಗೆ |
| 4 | ಪರೀಕ್ಷಾ ದಿನಾಂಕ | 06/11/2022 |
| 5 | ಪರೀಕ್ಷಾ ಕೇಂದ್ರ | ಪ್ರವೇಶ ಪತ್ರದಲ್ಲಿ ಸೂಚಿಸಿರುವಂತೆ |
| 6 | ಪರೀಕ್ಷೆಯ ದಿನದಂದು ತರಬೇಕಾದ ವಸ್ತುಗಳು | ಪ್ರವೇಶ ಪತ್ರ ಮತ್ತು ಒಳ್ಳೆಯ ಗುಣಮಟ್ಟದ ನೀಲಿ / ಕಪ್ಪು ಬಾಲ್ ಪಾಯಿಂಟ್ ಪೆನ್ನುಗಳು |

## 20. ಪರೀಕ್ಷಾ ವೇಳಾ ಪಟ್ಟಿ

| ಕ್ರಮ ಸಂಖ್ಯೆ | ಪರೀಕ್ಷಾ ದಿನಾಂಕ | 06/11/2022 | |
|---|---|---|---|
| | | ಪತ್ರಿಕೆ-1 | ಪತ್ರಿಕೆ 2 |
| 1 | ಪರೀಕ್ಷಾ ಕೊಠಡಿಗೆ ಪ್ರವೇಶಿಸುವ ಸಮಯ | 9.00 A.M | 1.30 P.M |
| 2 | ಪ್ರವೇಶ ಪತ್ರಗಳ ಪರಿಶೀಲನೆ | 9.00 ರಿಂದ 9.15 A.M | 1.30 ರಿಂದ 1.45 P.M |
| 3 | ಪರೀಕ್ಷಾ ಪುಸ್ತಿಕೆಗಳ ವಿತರಣೆ | 9.15 A.M | 1.45 P.M |
| 4 | ಉತ್ತರ ಪತ್ರಿಕೆಗಳನ್ನೊಳಗೊಂಡ ಪರೀಕ್ಷಾ ಪುಸ್ತಕಗಳ ಸೀಲನ್ನು ತೆಗೆಯುವುದು | 9.25 A.M | 1.55 P.M |
| 5 | ಪರೀಕ್ಷಾ ಕೊಠಡಿಯಲ್ಲಿ ಕೊನೆಯ ನಮೂದು | 9.30 A.M | 2.00 P.M |
| 6 | ಪರೀಕ್ಷಾ ಪ್ರಾರಂಭ | 9.30 A.M | 2.00 P.M |
| 7 | ಪರೀಕ್ಷೆ ಮುಕ್ತಾಯ | 12.00 ಗಂಟೆ ಮಧ್ಯಾಹ್ನ | 4.30 P.M |

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.